## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 578 ಗ್ರಾಪಂಕಾ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 05.03.2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ. ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ತುರ್ತು**

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ಮಾನ್ಯರೆ,**

**ವಿಷಯ:** ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ/578/ಗ್ರಾಪಂಕಾ/2015, ದಿನಾಂಕ 30.06.2016.
2. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ – ಇಡಿ/ಕೆಇಎ/ಡಳಿತ/ಸಿಆರ್-06/2015-16, ದಿನಾಂಕ 03.03.2018.
3. ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ/76/ಸೇನೆನಿ/2018, ದಿನಾಂಕ 15.02.2018.
4. ವಿಶೇಷ ಆಯ್ಕೆ ಸಮಿತಿಯ ದಿನಾಂಕ: 27.02.2018ರಂದು ನಡೆಸಿದ ಸಭೆಯ ನಡವಳಿ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನೇರ ನೇಮಕಾತಿ ಅಡಿ ಖಾಲಿ ಇದ್ದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಿಕೊಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿತ್ತು.

ಉಲ್ಲೇಖ (2) ರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಿ ಅಂತಿಮ ಆಯ್ಕೆ ಪಟ್ಟಿಗಳನ್ನು ಸರ್ಕಾರಕ್ಕೆ ಕಳುಹಿಸಿರುತ್ತದೆ. ಜೊತೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ತನ್ನ ವೆಬ್‌ಸೈಟ್ http://kea.kar.nic.in/ ರಲ್ಲಿ ಜಿಲ್ಲಾವಾರು ಅಂತಿಮ ಆಯ್ಕೆ ಪಟ್ಟಿಗಳನ್ನು ಪ್ರಕಟಿಸಿದೆ. ಈ ಆಯ್ಕೆ ಪಟ್ಟಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕೃತ ವೆಬ್‌ಸೈಟ್ rdpr.kar.nic.in ನಲ್ಲಿ ಸಹ ಪ್ರಕಟಿಸಲಾಗಿದೆ.

ಉಲ್ಲೇಖ (4) ರಂತೆ ದಿನಾಂಕ: 27.02.2018 ರಂದು ಆಯ್ಕೆ ಸಮಿತಿಯ ಸಭೆ ನಡೆಸಿ ಈ ವಿಷಯದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲಾಗಿದೆ. ಈ ಸಭೆಯಲ್ಲಿ ಕೈಗೊಂಡ ತಿರ್ಮಾನದಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರೇಡ್-1 ಕಾರ್ಯದರ್ಶಿ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲು ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಕೆಳಕಂಡಂತೆ ಕ್ರಮವಹಿಸುವಂತೆ ತಿಳಿಸಿದೆ.

1. ಜಿಲ್ಲಾವಾರು ಆಯ್ಕೆ ಪಟ್ಟಿ ಸ್ವೀಕೃತವಾದ ಕೂಡಲೇ ಆಯ್ಕೆಯಾಗಿರುವ ಅಭ್ಯರ್ಥಿಗಳ ಅರ್ಜಿ ನಮೂನೆ ಹಾಗೂ ಅರ್ಜಿಗಳ ಜೊತೆ ಸಲ್ಲಿಸಲಾಗಿರುವ ಎಲ್ಲಾ ದಾಖಲೆಗಳ ಪ್ರತಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿದ್ದು, ಅವುಗಳನ್ನು ಜಿಲ್ಲಾ ಪಂಚಾಯತಿಯ ಒಬ್ಬ ಜವಾಬ್ದಾರಿಯುತ ಅಧಿಕಾರಿಯನ್ನು ನಿಯೋಜಿಸಿ ಕೂಡಲೇ ಪಡೆದುಕೊಳ್ಳುವುದು.
2. ನಂತರ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮೊದಲು ಸಕ್ಷಮ ಪ್ರಾಧಿಕಾರದಿಂದ ದೈಹಿಕ ಸಾಮರ್ಥ್ಯದ ಬಗ್ಗೆ ವೈದ್ಯಕೀಯ ಪರೀಕ್ಷಾ ವರದಿ, ನಡತೆ ಮತ್ತು ಪೂರ್ವ ಚರಿತ್ರೆಯ ಬಗ್ಗೆ ಪೊಲೀಸ್ ವರದಿ ಹಾಗೂ ಜಾತಿ/ಆದಾಯ/ಮೀಸಲಾತಿಗೆ ಸಂಬಂಧಿಸಿದಂತೆ ಸಿಂಧುತ್ವ ಪ್ರಮಾಣ ಪತ್ರಗಳನ್ನು ತ್ವರಿತವಾಗಿ ನೀಡಲು ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ಪತ್ರ ಬರೆಯುವುದು.
3. ಕ್ರಮ ಸಂಖ್ಯೆ (2) ರಲ್ಲಿ ತಿಳಿಸಿದ ಪ್ರಮಾಣ ಪತ್ರಗಳು ಸಲ್ಲಿಕೆಯಾದ ಕೂಡಲೇ ವಿದ್ಯಾರ್ಹತೆ ಹಾಗೂ ಸಮತಳ ಮೀಸಲಾತಿಗೆ ಸಂಬಂಧಿಸಿದ ಮೂಲ ದಾಖಲಾತಿಗಳನ್ನು ಪಡೆದು ಪರಿಶೀಲಿಸುವುದು.
4. ಕ್ರಮ ಸಂಖ್ಯೆ (2) ಮತ್ತು (3) ರ ಪ್ರಮಾಣ ಪತ್ರಗಳು ಸಲ್ಲಿಕೆಯಾದ ಕೂಡಲೇ ಸಕ್ರಮವಾಗಿರುವುದನ್ನು ಖಾತರಿಪಡಿಸಿಕೊಂಡು ನೇಮಕಾತಿ ಆದೇಶ ಹೊರಡಿಸುವುದು.
5. ಸಿಂಧುತ್ವ ಪ್ರಮಾಣ ಪತ್ರ ಅನ್ವಯಿಸದಿರುವ ಸಾಮಾನ್ಯ ಅಭ್ಯರ್ಥಿಗಳಿಗೆ ವೈದ್ಯಕೀಯ ಪರೀಕ್ಷಾ ವರದಿ, ಪೊಲೀಸ್ ವರದಿ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಕ್ರಮವಾಗಿರುವುದನ್ನು ಖಾತರಿಪಡಿಸಿಕೊಂಡು ನೇಮಕಾತಿ ಆದೇಶ ಹೊರಡಿಸುವುದು.
6. ಹೀಗೆ ಪರಿಶೀಲಿಸಿ ನೇಮಕಾತಿ ಆದೇಶ ಹೊರಡಿಸುವ ಪ್ರಕ್ರಿಯೆಯಲ್ಲಿ ಎಲ್ಲಾ ಅಭ್ಯರ್ಥಿಗಳಿಗೂ ಕಾಯದೆ, ಅವಶ್ಯ ದಾಖಲಾತಿಗಳನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ ಕೂಡಲೇ ನೇಮಕಾತಿ ಆದೇಶ ನೀಡುವುದು. ಉಳಿದ ಅಭ್ಯರ್ಥಿಗಳಿಗೆ ಸಿಂಧುತ್ವ ಪ್ರಮಾಣ ಪತ್ರ ಸ್ವೀಕರಿಸಿದ ನಂತರ ನೇಮಕಾತಿ ಆದೇಶ ಹೊರಡಿಸುವುದು.
7. ನೇಮಕಾತಿ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1957 ರ ನಿಯಮ 18 ರ ಅನುಸಾರ ವರದಿ ಮಾಡಿಕೊಳ್ಳಲು 15 ದಿನಗಳ ಕಾಲಾವಕಾಶ ನೀಡುವುದು.
8. ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆಯು ದಿನಾಂಕ 15.02.2018 ರಂದು ಹೊರಡಿಸಿರುವ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಿರುವಂತೆ ತಡವಾಗಿ ನೇಮಕಗೊಂಡ ಅಭ್ಯರ್ಥಿಗಳ ಜೇಷ್ಠತೆ ಈ ಕಾರಣದಿಂದ ವ್ಯತ್ಯಾಸವಾಗುವುದಿಲ್ಲ. ಆಯ್ಕೆ ಪಟ್ಟಿಯಲ್ಲಿರುವ ಜೇಷ್ಠತೆಯೇ ಅನ್ವಯವಾಗುತ್ತದೆ.
9. ಅಂಗವಿಕಲ ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ವೈದ್ಯಕೀಯ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವೈದ್ಯಕೀಯ ಮಂಡಳಿಯಿಂದ ಮಾಡಿಸಿರುವುದರಿಂದ ಮತ್ತೊಮ್ಮೆ ವೈದ್ಯಕೀಯ ಪರೀಕ್ಷೆ ನಡೆಸುವ ಅವಶ್ಯಕತೆ ಇರುವುದಿಲ್ಲ. ವೈದ್ಯಕೀಯ ಮಂಡಳಿ ನೀಡಿರುವ ಪ್ರಮಾಣ ಪತ್ರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪಡೆದು ಅವುಗಳನ್ನು ಪರಿಗಣಿಸುವುದು. ಇದನ್ನು ಹೊರತು ಪಡಿಸಿ ಇತರೆ ಮೂಲ ದಾಖಲಾತಿಗಳನ್ನು ಪರಿಶೀಲನೆ ಮಾಡುವುದು ಮತ್ತು ಸಿಂಧುತ್ವ ಪ್ರಮಾಣಪತ್ರ ಅವಶ್ಯವಿರುವ ಕಡೆ ಅವುಗಳನ್ನು ಪಡೆಯುವುದು.

10. ನೇಮಕಾತಿ ಹೊಂದಿದ ಅಭ್ಯರ್ಥಿಗಳನ್ನು ಖಾಲಿ ಇರುವ ಗ್ರಾಮ ಪಂಚಾಯಿತಿಗಳಿಗೆ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಿ, ಕಾರ್ಯವರದಿ ಮಾಡಿಕೊಳ್ಳಲು ಸೂಚಿಸುವುದು.

11. ನಂತರ ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೈಸೂರು ಇವರ ವತಿಯಿಂದ ನಡೆಸಲಾಗುವ ತರಬೇತಿಗೆ ನಿಯೋಜಿಸುವುದು.

12. ಈ ಆಯ್ಕೆ ಪಟ್ಟಿಗಳ ಅನುಸಾರ ಕೆಲವು ಜಿಲ್ಲಾ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಅಂಗವಿಕಲ ಮೀಸಲಾತಿ ಕೋಟಾದಲ್ಲಿ ವೈದ್ಯಕೀಯ ಪರೀಕ್ಷೆ ನಡೆಸಿರುವ ಅಭ್ಯರ್ಥಿಗಳಲ್ಲಿ ಕೊರತೆ ಉಂಟಾಗಿದ್ದು ಈ ಸ್ಥಾನಗಳಿಗೆ ಆಯ್ಕೆ ಪಟ್ಟಿಯನ್ನು ಪ್ರತ್ಯೇಕವಾಗಿ ನೀಡಲಾಗುವುದು.

13. ಈ ಕೆಳಕಂಡ ಅಭ್ಯರ್ಥಿಗಳ ಹೆಸರಿನ ಎದುರು ಅಂತಿಮ ಆಯ್ಕೆ ಪಟ್ಟಿಯಲ್ಲಿ (*) ಗುರುತು ನಮೂದಿಲಾಗಿದೆ. ಸದರಿ ಅಭ್ಯರ್ಥಿಗಳು ಸಲ್ಲಿಸಿರುವ ದಾಖಲೆಗಳನ್ನು ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆಯ ಆದೇಶ/ಸುತ್ತೋಲೆಗಳ ಅನುಸಾರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅವರ ಹಂತದಲ್ಲಿಯೇ ಪರಿಶೀಲಿಸಬೇಕಿದ್ದು, ಈ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ ಮುಂದಿನ ನಿರ್ದೇಶನ ನೀಡುವವರೆಗೆ ಕಾಯುವುದು.

| ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು: | | | |
|---|---|---|---|
| CHIKKABALLAPURA | MC03436 | GEETHA | SC/W* |
| CHITRADURGA | GG11085 | RAMALINGAPPA S.R. | 2A* |
| DAVANAGERE | GD13134 | MALATHESHA D. | 2A/RL* |
| MANDYA | PP13302 | HARISH P.R. | 3B/XMP* |
| ಗ್ರೇಡ್–1 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು: | | | |
| RAMANAGARA | AS23511 | LALITHABAI U.N. | SC/W* |
| TUMKUR | AN16126 | NAVEENA KUMARA B.N. | GM/RL* |

14. ಉಲ್ಲೇಖ (2) ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಪತ್ರದಲ್ಲಿ ತಿಳಿಸಿರುವಂತೆ ಪ್ರಕಟಿಸಲಾಗಿರುವ ಆಯ್ಕೆಪಟ್ಟಿಗೆ ಶೇ.25 ರಷ್ಟು ಹೆಚ್ಚುವರಿ ಆಯ್ಕೆಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು.

ಮೇಲ್ಕಂಡಂತೆ ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು 24.03.2018 ರೊಳಗಾಗಿ ಪೂರ್ಣಗೊಳಿಸಿ, ಸರ್ಕಾರಕ್ಕೆ ವರದಿ ಮಾಡುವುದು.

5/3/18
(ಎಂ.ಕೆ. ಕೆಂಪೇಗೌಡ )
ನಿರ್ದೇಶಕರು (ಪಂ.ರಾಜ್–1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿ:**

ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

**ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.

ಸಂಖ್ಯೆ. ಇಡಿ/ಕೆಇಎ/ಆಡಳಿತ/ಸಿಆರ್–06/2015–16 03.03.2018

ಗೆ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಮಾನ್ಯರೆ,

ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮಪಂಚಾಯತ್ ಕಾರ್ಯದರ್ಶಿ–ಗ್ರೇಡ್–1 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ನೀಡುವ ಬಗ್ಗೆ

ಉಲ್ಲೇಖ: 1) ಸರ್ಕಾರಿ ಆದೇಶ ಸಂ. ಗ್ರಾಅಪ/578/ಗ್ರಾಪಂಕಾ/2015 ದಿ.30.06.2016
2)ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರ ಶಾಖೆ)(ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ ಗ್ರೇಡ್–I )(ವಿಶೇಷ) ನಿಯಮಗಳು, 2014
3) ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977
4)ಕೆಇಎಅಧಿಸೂಚನೆ ಸಂಖ್ಯೆ. ಇಡಿ/ಕೆಇಎ/ಆಡಳಿತ/ಸಿಆರ್–06/2015–16 ದಿ. 07.09.2016
5) ಸಿಆಸುಇ 571 ಸೇನಿಎ 2017 ದಿನಾಂಕ. 13.12.2017ರ ಟಿಪ್ಪಣಿ
6) ಸರ್ಕಾರಿ ಸುತ್ತೋಲೆ ಸಂ. ಸಿಆಸುಇ/78/ಹೈಕಕೋ/2014 ದಿ. 16.11.2016
7) ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ 128 ಸೇನೆನಿ 2006 ದಿ. 01.08.2009

---

ಮೇಲಿನ ವಿಷಯ ಮತ್ತು ಉಲ್ಲೇಖಗಳ ಕಡೆ ಗಮನ ಹರಿಸಲು ಕೋರಿದೆ. ಉಲ್ಲೇಖ(1) ರ ಆದೇಶದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮಪಂಚಾಯತ್ ಕಾರ್ಯದರ್ಶಿ–ಗ್ರೇಡ್–1 ಹುದ್ದೆಗಳ ನೇಮಕಾತಿ ಸಂಬಂಧ ಉಲ್ಲೇಖ(2) ಮತ್ತು (3)ರ ನಿಯಮಗಳಡಿಯಲ್ಲಿ ಹೊರಡಿಸಲಾಗಿರುವ ಉಲ್ಲೇಖ(4) ರಂತೆ 07.09.2016ರಂದು ಅಧಿಸೂಚನೆ ಹೊರಡಿಸಿ, ಕೆಇಎ ವೆಬ್‌ಸೈಟ್ ಹಾಗೂ ಕನ್ನಡ ಮತ್ತು ಇಂಗ್ಲೀಷ್ ದಿನಪತ್ರಿಕೆಗಳಲ್ಲಿ ಜಾಹಿರಾತು ನೀಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಲು ಪ್ರಕಟಣೆ ಹೊರಡಿಸಲಾಗಿತ್ತು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 15.10.2016 ಆಗಿದೆ. ಕೊನೆಯ ದಿನಾಂಕದಂದು ಅಧಿಸೂಚನೆಗೆ ಎದುರಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳಿಗೆ ರಾಜ್ಯಾದ್ಯಂತ ಲಿಖಿತ ಪರೀಕ್ಷೆಯನ್ನು ದಿನಾಂಕ 29.01.2017 ರಂದು paper–I (ಸಾಮಾನ್ಯ ಜ್ಞಾನ, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲೀಷ್) & paper-II ವಿಷಯಗಳಿಗೆ ನಡೆಸಲಾಗಿರುತ್ತದೆ. ಈ ಲಿಖಿತ ಪರೀಕ್ಷೆಯಲ್ಲಿ ಒಟ್ಟು ಗರಿಷ್ಟ 400 ಅಂಕಗಳಿದ್ದು ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು(ವಿಷಯವಾರು), ಅಭ್ಯರ್ಥಿಗಳ ಮಾಹಿತಿಗಾಗಿ 25.04.2017ರಂದು ಪ್ರಕಟಿಸಲಾಗಿದೆ. ಈ



18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.
18th Cross, Sampige Road, Malleshwaram, Bangalore – 560 012.
Phone: 080-2356 4583, 2336 1786, Fax: 080-2346 1576
Website : http://kea.kar.nic.in e-mail : keauthority-ka@nic.in

ರೀತಿ ಪ್ರಕಟಿಸಿದ ಫಲಿತಾಂಶದಲ್ಲಿ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು. ನಿಗದಿತ ಅವಧಿಯೊಳಗೆ ಸಲ್ಲಿಸಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲಾಗಿದೆ. ಈ ಮಧ್ಯೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಕೆಲವು ಅಭ್ಯರ್ಥಿಗಳು ಅರ್ಜಿ ಸಂಖ್ಯೆ. 4662/2017 ಹಾಗೂ ಇತರೆ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ. 22.09.2017ರಂದು ನೀಡಿರುವ ಆದೇಶದಂತೆ ಅಂತಿಮ ಕೀ ಉತ್ತರಗಳಲ್ಲಿ ಸ್ವಲ್ಪ ಬದಲಾವಣೆ ಆದ ಕಾರಣ ಮತ್ತೊಮ್ಮೆ ವಿಷಯ ತಜ್ಞರು ನೀಡಿದ ವರದಿಯಂತೆ ಅಂತಿಮ ಕೀ ಉತ್ತರಗಳ ಆಧಾರದ ಮೇಲೆ ಮತ್ತೊಮ್ಮೆ ಮೌಲ್ಯಮಾಪನೆ ಮಾಡಿ ಫಲಿತಾಂಶವನ್ನು 13.10.2017 ರಂದು ಪ್ರಕಟಿಸಲಾಗಿದೆ. ಈ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರ ಮೇಲೆ ಮತ್ತು ಇಲಾಖೆಯು ನೀಡಿದ ಮೀಸಲಾತಿ ಅನುಸಾರ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿ 1:3 ಅನುಪಾತದಲ್ಲಿ ಅಭ್ಯರ್ಥಿಗಳನ್ನು ದಾಖಲಾತಿ ಪರಿಶೀಲನೆಗೆ ಕರೆಯಲಾಗಿತ್ತು. ಈ ಪಟ್ಟಿಯನ್ನು ಕೆಇಎ ವೆಬ್‌ಸೈಟಿನಲ್ಲಿ ದಿನಾಂಕ 14.11.2017 ರಂದು ಪ್ರಕಟಿಸಲಾಗಿದೆ. ಈ ಪ್ರಕಟಣೆಯಂತೆ ದಾಖಲಾತಿ ಪರಿಶೀಲನೆಯನ್ನು ಬೆಂಗಳೂರು ಕಛೇರಿಯಲ್ಲಿ ದಿನಾಂಕ 21.11.2017 ರಿಂದ 24.11.2017 ಮತ್ತು ದಿನಾಂಕ 07.12.2017ರಂದು ನಡೆಸಲಾಗಿದೆ. ಈ ಪಟ್ಟಿಯಲ್ಲಿ ಸೇರಿದ ಅಂಗವಿಕಲ ಮೀಸಲಾತಿ ಕೋರಿರುವ ಅಭ್ಯರ್ಥಿಗಳಿಗೆ ಉಲ್ಲೇಖ(5) ರ ಟಿಪ್ಪಣಿ ಪ್ರಕಾರ ದಿನಾಂಕ 22.12.2017, 27.12.2017, 03.01.2018 ರಂದು ಪ್ರಾಧಿಕಾರವು ನೇಮಿಸಿದ ಸರ್ಕಾರಿ ವೈದ್ಯಾಧಿಕಾರಿಗಳ ತಂಡದಿಂದ ವೈದ್ಯಕೀಯ ಪರೀಕ್ಷೆಯನ್ನು ನಡೆಸಿ ಆಯಾ ದಿನದ ಫಲಿತಾಂಶವನ್ನು ಕೆಇಎ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಮೊದಲ ಬಾರಿ ವೈದ್ಯಕೀಯ ಪರೀಕ್ಷೆಗೆ ಗೈರು ಹಾಜರಾದ ಅಭ್ಯರ್ಥಿಗಳಿಗೆ ಎರಡನೇ ಬಾರಿ 04.01.2018 ರಂದು ಹಾಜರಾಗಲು ತಿಳಿಸಲಾಗಿದೆ. ಹೀಗಾಗಿ ಒಟ್ಟು 237 ಅಭ್ಯರ್ಥಿಗಳನ್ನು ವೈದ್ಯಕೀಯ ಪರೀಕ್ಷೆಗೆ ಕರೆದಿದ್ದು, 227 ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ಹಾಜರಾಗಿರುತ್ತಾರೆ. 106 ಅಭ್ಯರ್ಥಿಗಳು ಅಂಗವಿಕಲ ಮೀಸಲಾತಿಗೆ ಅರ್ಹರೆಂದು ವೈದ್ಯರ ತಂಡವು ದೃಢೀಕರಿಸಿರುತ್ತಾರೆ. ಶೇಕಡ 40ಕ್ಕಿಂತ ಕಡಿಮೆ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು, ವೈದ್ಯಕೀಯ ಪರೀಕ್ಷೆಗೆ ಹಾಜರಾಗದಿರುವ ಹಾಗೂ ವೈದ್ಯಕೀಯ ಪರೀಕ್ಷೆಯ ಫಲಿತಾಂಶ ಸಲ್ಲಿಸದವರನ್ನು ಅಂಗವಿಕಲ ಮೀಸಲಾತಿಯಿಂದ ಹೊರತೆಗೆದು ಉಳಿದಂತೆ ಅಭ್ಯರ್ಥಿಗಳು ಸಲ್ಲಿಸಿರುವ ದಾಖಲೆಗಳ ಆದಾರದ ಮೇಲೆ ಅಂಗವಿಕಲ ಮೀಸಲಾತಿ ಹೊರತುಪಡಿಸಿ ಬೇರೆ ಮೀಸಲಾತಿಗೆ ಅವಕಾಶ ನೀಡಲಾಗಿದೆ.

ಮೇಲೆ ತಿಳಿಸಿರುವಂತೆ ದಾಖಲಾತಿ ಪರಿಶೀಲನೆ ಮತ್ತು ವೈದ್ಯಕೀಯ ಪರೀಕ್ಷೆಯ ನಂತರ ಅರ್ಹ ಅಭ್ಯರ್ಥಿಗಳು, ಅವರು ದಾಖಲಾತಿ ಪರಿಶೀಲನೆಯಲ್ಲಿ ಅರ್ಹತೆ ಪಡೆದಿರುವ ಮೀಸಲಾತಿಗಳ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ನಮೂದಿಸಿರುವ ಮೀಸಲಾತಿಯ ವಿವರಗಳನ್ನೊಳಗೊಂಡ ಪಟ್ಟಿಯನ್ನು 12.02.2018 ರಂದು ಕೆಇಎ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ ಮತ್ತು ಇದರಲ್ಲಿ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 17.02.2018 ರೊಳಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ಕೊನೆಯ ದಿನಾಂಕದವರೆಗೆ ಬಂದ ಎಲ್ಲಾ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.

ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಸಲ್ಲಿಸಿರುವ ದಾಖಲೆಗಳನ್ನು ಈ ಕಛೇರಿಯಲ್ಲಿ ಪರಿಶೀಲಿಸಲಾಗಿದ್ದು ಕೆಲವೊಂದು ಅಭ್ಯರ್ಥಿಗಳ ದಾಖಲೆಗಳು ನಿಯಮಾನುಸಾರ ಇಲ್ಲದ ಕಾರಣ ಉಲ್ಲೇಖ

(3) ರ ನಿಯಮ 20ರಡಿಯಲ್ಲಿ ನೋಟಿಸ್ ನೀಡಿ ಅಗತ್ಯ ದಾಖಲೆಗಳನ್ನು ಸಲ್ಲಿಸಲು ತಿಳಿಸಲಾಗಿತ್ತು. ಅದರಂತೆ ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ ನಿಯಮಾನುಸಾರ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗಿದೆ.

ದಾಖಲೆ ಪರಿಶೀಲನೆಯ ನಂತರ ಪ್ರತಿ ಅಭ್ಯರ್ಥಿ ಪಡೆದ ಮೀಸಲಾತಿಯ ವಿವರಗಳನ್ನು ಮತ್ತು ಅವರು ಕೆಇಎ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಮತ್ತು ಸರ್ಕಾರ ನಿಗದಿಪಡಿಸಿರುವ ಹುದ್ದೆವಾರು ಮೀಸಲಾತಿ ಅನುಸಾರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗಿದೆ. ಈ ಪಟ್ಟಿಯನ್ನು ತಯಾರಿಸುವಾಗ ಸರ್ಕಾರ ಉಲ್ಲೇಖ(7) ರಲ್ಲಿ ತಿಳಿಸಿರುವಂತೆ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಬೇರೆ ಅಂಗವಿಕಲತೆಯುಳ್ಳ ಅಭ್ಯರ್ಥಿಗಳನ್ನು ಒಟ್ಟುಗೂಡಿಸಿ ಅದರಲ್ಲಿ ಹೆಚ್ಚು ಅಂಕಗಳಿಸಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗಿದೆ. ಮುಂದುವರೆದು ಉಲ್ಲೇಖ (6)ರಲ್ಲಿ ತಿಳಿಸಿರುವ ಸರ್ಕಾರಿ ಸುತ್ತೋಲೆ ಪ್ರಕಾರ Non-HK (ಮಿಕ್ಕುಳಿದ) ವೃಂದದಲ್ಲಿ ಲಬ್ಯವಿರುವ ಹುದ್ದೆಗಳನ್ನು ಪರಿಗಣಿಸಿ, ಆಯ್ಕೆ ಪಟ್ಟಿ ತಯಾರಿಸಲಾಗಿದೆ. ತದನಂತರ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಅರ್ಹ ಸ್ಥಳೀಯ ಅಭ್ಯರ್ಥಿಗಳ ಆಯ್ಕೆ ಪಟ್ಟಿ ತಯಾರಿಸಲಾಗಿದೆ.

ಉಲ್ಲೇಖ (4) ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಮೊದಲಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ನಂತರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಆಯ್ಕೆ ಆಗಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಅಭ್ಯರ್ಥಿಗಳನ್ನು ಗ್ರಾಮ ಪಂಚಾಯತ್ ಕಾರ್ಯದರ್ಶಿ–ಗ್ರೇಡ್ –I ಹುದ್ದೆಗಳಿಗೆ ಆಯ್ಕೆ ಮಾಡಲಾಗಿದೆ. ಈ ರೀತಿ ಆಯ್ಕೆ ಮಾಡುವಾಗ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗಳಲ್ಲಿ PH, Ex Military, women, PDP ಮೀಸಲಾತಿಯಲ್ಲಿ ದಾಖಲಾತಿ ಪರಿಶೀಲನೆಗೆ ಕರೆದಿದ್ದ ಅಭ್ಯರ್ಥಿಗಳ ಸಂಖ್ಯೆ ಕಡಿಮೆ ಇದ್ದು ದಾಖಲಾತಿ ಪರಿಶೀಲನೆ ಆಗಿರುವ ಅಭ್ಯರ್ಥಿಗಳ ಕೊರತೆ ಇದ್ದ ಕಾರಣ PDO-HK – 04, Non-HK-04 ಈ ಹುದ್ದೆಗಳನ್ನು ಖಾಲಿ ಉಳಿಸಿಕೊಳ್ಳಲಾಗಿದೆ. ಅದೇ ರೀತಿ GPS-I ಹುದ್ದೆಗಳಲ್ಲಿ ಒಟ್ಟು Non-HK- 31, ಮತ್ತು HK – 05 ಅಭ್ಯರ್ಥಿಗಳ ಕೊರತೆಯಿರುತ್ತದೆ. ಈ ಕಾರಣದಿಂದ ಅವುಗಳನ್ನು ಹಾಗೆಯೇ ಖಾಲಿ ಉಳಿಸಿಕೊಳ್ಳಲಾಗಿದೆ. ಉಳಿದಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾವಾರು ದೃಢೀಕರಿಸಿ 23.02.2018 ರಂದು ಕೆಇಎ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿತ್ತು ಮತ್ತು ಈ ಪಟ್ಟಿಯಲ್ಲಿ ಏನಾದರು ಆಕ್ಷೇಪಣೆಗಳಿದ್ದಲ್ಲಿ 26.02.2018 ರೊಳಗೆ ಲಿಖಿತವಾಗಿ ಅಥವಾ ಅಂಚೆ ಮೂಲಕ ತಿಳಿಸಲು ಸೂಚಿಸಲಾಗಿದೆ. ಕೊನೆಯ ದಿನಾಂಕದೊಳಗೆ ಬಂದ ಎಲ್ಲಾ ಆಕ್ಷೇಪಣೆಗಳನ್ನು ವಿವರವಾಗಿ ನಿಯಮಗಳಡಿಯಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಈ ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರ ಅಂತಿಮವಾಗಿ ಆಯ್ಕೆ ಪಟ್ಟಿಯನ್ನು ದಿನಾಂಕ. 01.03.2018ರಂದು ಕೆಇಎ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಈ ಪಟ್ಟಿಯನ್ನು ಪ್ರಕಟಿಸುವ ಸಂದರ್ಭದಲ್ಲಿ ಈ ನೇಮಕಾತಿಗೆ ಸಂಬಂಧಿಸಿದಂತೆ ಯಾವುದೇ ನ್ಯಾಯಾಲಯದ ಪ್ರಕರಣಗಳಿದ್ದಲ್ಲಿ ಈ ಆಯ್ಕೆ ಪಟ್ಟಿಯು ಆ ಪ್ರಕರಣಗಳ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ಕೂಡ ಪ್ರಕಟಿಸಲಾಗಿದೆ. ಈ ಪಟ್ಟಿಯಲ್ಲಿ ಮುಖ್ಯವಾಗಿ 44 ಹುದ್ದೆಗಳನ್ನು ಹಾಗೆಯೇ ಖಾಲಿ ಉಳಿಸಿಕೊಳ್ಳಲಾಗಿದೆ. ಅಂತಿಮ ಪಟ್ಟಿಯಲ್ಲಿ ಆಯ್ಕೆಯಾಗಿರುವ ಈ ಕೆಳಗೆ ತಿಳಿಸಿರುವ 06 ಅಭ್ಯರ್ಥಿಗಳ ಹೆಸರಿನ ಎದುರು ಪಟ್ಟಿಯಲ್ಲಿ * ಅನ್ನು

ನಮೂದಿಸಲಾಗಿದೆ. ಆ ಅಭ್ಯರ್ಥಿಗಳು ಸಲ್ಲಿಸಿರುವ ದಾಖಲೆಗಳನ್ನು ಸಿಆಸುಇ ಇಲಾಖೆಯಿಂದ ನೀಡಿರುವ ಆದೇಶ ಮತ್ತು ಸುತ್ತೋಲೆಗಳ ಪ್ರಕಾರ ತಮ್ಮ ಹಂತದಲ್ಲಿಯೇ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದು.

| | | |
|---|---|---|
| MC03436 | GEETHA | SC/W * |
| GG11085 | RAMALINGAPPA S R | 2A * |
| GD13134 | MALATHESHA D | 2A/RL * |
| PP13302 | HARISH P R | 3B/XMP * |
| AS23511 | LALITHA BAI U N | SC/W * |
| AN16126 | NAVEENA KUMARA B N | GM/RL * |

ಈ ರೀತಿ ಅಂತಿಮವಾಗಿ ಪ್ರಕಟಿಸಿರುವ ಆಯ್ಕೆ ಪಟ್ಟಿಯನ್ನು ಈ ಪತ್ರಕ್ಕೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಲಾಗಿದೆ. ಅಂತಿಮ ಪಟ್ಟಿಯಲ್ಲಿ ಖಾಲಿಯಿರುವ ಒಟ್ಟು 44 ಹುದ್ದೆಗಳನ್ನು ಮತ್ತು ಉಲ್ಲೇಖ(2) ರ ನಿಯಮ 7 (3) ರಂತೆ ಶೇಕಡ 25ರಷ್ಟು ಹೆಚ್ಚುವರಿ ಪಟ್ಟಿಯನ್ನು ಸಧ್ಯದಲ್ಲಿಯೇ ತಯಾರಿಸಲಾಗುವುದು. ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ದಾಖಲೆಗಳ ಪ್ರತಿಯನ್ನು ಕಳುಹಿಸಲು ತಮ್ಮ ಇಲಾಖೆಯಿಂದ ಒಬ್ಬರು ಜವಾಬ್ದಾರಿ ಅಧಿಕಾರಿಯನ್ನು ಕೆಇಎಗೆ ಕಳುಹಿಸಿಕೊಡಲು ಕೋರಿದೆ.

ತಮ್ಮ ನಂಬುಗೆಯ,

2/3/18

ಕಾರ್ಯನಿರ್ವಾಹಕ ನಿರ್ದೇಶಕರು

ಅಡಕಗಳು: ಉಲ್ಲೇಖಿತ ಪತ್ರಗಳನ್ನು ಲಗತ್ತಿಸಿದೆ.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 76 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 15/02/2018

## ಸುತ್ತೋಲೆ

ವಿಷಯ : ರಾಜ್ಯ ನಾಗರಿಕ ಸೇವಾ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆಗೊಳ್ಳುವ ಅಭ್ಯರ್ಥಿಗಳನ್ನು ನೇಮಿಸಲು ನೇಮಕಾತಿ ಪ್ರಾಧಿಕಾರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ : (1) ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 23 ಎಸ್‌ಆರ್‌ಆರ್ 92, ದಿನಾಂಕ: 29/06/1992

(2) ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 149 ಸೇನೆನಿ 2010, ದಿನಾಂಕ: 18/10/2010

*****

1) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 10ರನ್ವಯ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆ ಬಗ್ಗೆ ಹಾಗೂ ನಿಯಮ 12ರನ್ವಯ ಅಭ್ಯರ್ಥಿಗಳು ಕರ್ತವ್ಯ ನಿರ್ವಹಿಸಲು ದೈಹಿಕ ಸಾಮರ್ಥ್ಯ ಹೊಂದಿರುವ ಬಗ್ಗೆ ಖಚಿತಪಡಿಸಿಕೊಳ್ಳದೇ ನೇಮಕ ಮಾಡಲು ಅವಕಾಶವಿರುವುದಿಲ್ಲ.

2) ಉಲ್ಲೇಖ (1)ರ ದಿನಾಂಕ: 29/06/1992ರ ಅಧಿಕೃತ ಜ್ಞಾಪನದಲ್ಲಿ ಲೋಕಸೇವಾ ಆಯೋಗ ಅಥವಾ ನೇಮಕಾತಿ ಸಮಿತಿ ಮೂಲಕ ಆಯ್ಕೆ ಹೊಂದಿದ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಸೇರಿದಂತೆ ಅಭ್ಯರ್ಥಿಗಳು ಮೀಸಲಾತಿ ಕೋರಿ ಸಲ್ಲಿಸುವ ದಾಖಲಾತಿಗಳ ನೈಜತೆಯನ್ನು ಸಕ್ಷಮ ಪ್ರಾಧಿಕಾರಗಳಿಂದ ಮೂರು ತಿಂಗಳೊಳಗಾಗಿ ಪಡೆದು ನೇಮಕಾತಿ ಆದೇಶ ಹೊರಡಿಸಲು ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆ ನೀಡಲಾಗಿದೆ.

3) ಉಲ್ಲೇಖ (2)ರ ದಿನಾಂಕ: 18/10/2010ರ ಅಧಿಕೃತ ಜ್ಞಾಪನದಲ್ಲಿ ರಾಜ್ಯ ನಾಗರಿಕ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವಾಗ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯನ್ನು ಪರಿಶೀಲಿಸಿಕೊಂಡು ನೇಮಕಾತಿ ಆದೇಶ ಹೊರಡಿಸಲು ತಿಳಿಸಲಾಗಿದೆ.

ಪು.ತಿ.ನೋ..2

4) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ ನೇಮಕಾತಿಗಳು ಮುಂತಾದವುಗಳ ನಿಯಮಗಳು, 1992ರ ನಿಯಮ 9ರನ್ವಯ ಸಿಂಧುತ್ವ ಪ್ರಮಾಣ ಪತ್ರ ಪಡೆಯದ ಯಾವುದೇ ವ್ಯಕ್ತಿಯನ್ನು ಸರ್ಕಾರದ ಸೇವೆಗಾಗಲೀ ಅಥವಾ ಹುದ್ದೆಗಾಗಲೀ ಇಲ್ಲವೇ ಸಾರ್ವಜನಿಕ ಕ್ಷೇತ್ರದ ಕಾರ್ಯ ಸಂಸ್ಥೆಗಾಗಲಿ ನೇಮಕ ಮಾಡಲು ಅವಕಾಶವಿಲ್ಲದ ಕಾರಣ ಸಿಂಧುತ್ವ ವರದಿ ಸ್ವೀಕೃತವಾಗದ ಅಭ್ಯರ್ಥಿಗೆ ನೇಮಕಾತಿ ಆದೇಶ ಹೊರಡಿಸತಕ್ಕದ್ದಲ್ಲ.

5) ನೇಮಕಾತಿ ಪ್ರಾಧಿಕಾರಗಳು ಆಯ್ಕೆಗೊಂಡ ಅಭ್ಯರ್ಥಿಗಳ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಹಾಗೂ ಮೀಸಲಾತಿ ಸಿಂಧುತ್ವದ ವರದಿಗಳನ್ನು ಸಕ್ಷಮ ಪ್ರಾಧಿಕಾರಗಳಿಂದ ನಿಗದಿತ ಕಾಲಾವಧಿಯೊಳಗೆ ಪಡೆಯಲು ಕ್ರಮವಹಿಸದೇ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲು ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ:

(ಅ) ಅಂತಿಮ ಆಯ್ಕೆಪಟ್ಟಿ ಸ್ವೀಕೃತವಾದ ಒಂದು ವಾರದೊಳಗಾಗಿ ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ, ವೈದ್ಯಕೀಯ ಪರೀಕ್ಷಾ ವರದಿ ಸೇರಿದಂತೆ ಮೀಸಲಾತಿಯಡಿ ಆಯ್ಕೆಗೊಂಡ ಅಭ್ಯರ್ಥಿಗಳ ಮೀಸಲಾತಿ ಸಿಂಧುತ್ವ ಪ್ರಮಾಣಪತ್ರ ಪಡೆಯಲು ಸಕ್ಷಮ ಪ್ರಾಧಿಕಾರಗಳಿಂದ ವರದಿ ಪಡೆಯಲು ಕ್ರಮವಹಿಸುವುದು.

(ಆ) ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ ಮತ್ತು ಮೀಸಲಾತಿಯಡಿ ಆಯ್ಕೆಗೊಂಡ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳ ನೈಜತೆಯ ಸಿಂಧುತ್ವ ವರದಿಗಳನ್ನು ಒಂದು ತಿಂಗಳೊಳಗಾಗಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸಲು ಸಕ್ಷಮ ಪ್ರಾಧಿಕಾರಗಳು ಕ್ರಮವಹಿಸುವುದು.

(ಇ) ಅಭ್ಯರ್ಥಿಗಳ ನಡತೆ ಮತ್ತು ಪೂರ್ವ ಚರಿತ್ರೆಯ ಪೋಲೀಸ್ ವರದಿ ಹಾಗೂ ವೈದ್ಯಕೀಯ ಪರೀಕ್ಷಾ ವರದಿಗಳು ಹಾಗೂ ಸಮತಳ ಮೀಸಲಾತಿ ಪ್ರಮಾಣ ಪತ್ರಗಳು ಸ್ವೀಕೃತವಾಗಿ ಮೀಸಲಾತಿ ಪ್ರಮಾಣಪತ್ರದ ಸಿಂಧುತ್ವ ವರದಿ ಸ್ವೀಕೃತವಾಗಲು ವಿಳಂಬವಾದಲ್ಲಿ, ಸಿಂಧುತ್ವ ಪ್ರಮಾಣ ಪತ್ರ ಅನ್ವಯಿಸದಿರುವ ಅಭ್ಯರ್ಥಿಗಳಿಗೆ ಮತ್ತು ಸಿಂಧುತ್ವದ ವರದಿ ಸ್ವೀಕೃತವಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವುದು.

ಮು.ತಿ.ನೋ..3

(ಈ) ಸಿಂಧುತ್ವ ಪ್ರಮಾಣ ಪತ್ರ ವಿಳಂಬವಾಗಿ ಸ್ವೀಕೃತವಾದ ಅಭ್ಯರ್ಥಿಗಳಿಗೆ ತದನಂತರ ನೇಮಕಾತಿ ಆದೇಶವನ್ನು ನೀಡುವುದು. ಈ ರೀತಿ ತಡವಾಗಿ ನೇಮಕಾತಿ ಆದೇಶ ನೀಡಿದರೂ ಸಹ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 5 ರನ್ವಯ ಅವರುಗಳು ಆಯ್ಕೆ ಪಟ್ಟಿಯಲ್ಲಿ ಯಾವ ಕ್ರಮಾಂಕದಲ್ಲಿರುತ್ತಾರೋ ಅದೇ ಕ್ರಮಾಂಕದಲ್ಲಿ ನಿಗದಿಪಡಿಸುವುದು.

(ಉ) ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957ರ ನಿಯಮ 5(2)ರನ್ವಯ ಆಯ್ಕೆಪಟ್ಟಿಯಲ್ಲಿರುವಂತೆ ಜೇಷ್ಠತಾ ಕ್ರಮಾಂಕವನ್ನು ನಿಗದಿಪಡಿಸಲಾಗುವುದೆಂಬ ಅಂಶವನ್ನು ನೇಮಕಾತಿ ಆದೇಶದಲ್ಲಿ ನಮೂದಿಸುವುದು.

(ಊ) ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಆಯ್ಕೆ ಮೂಲಕ ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2006ರನ್ವಯ ಆಯ್ಕೆ ಪಟ್ಟಿಯು ಜಾರಿಯಲ್ಲಿರುವ ಅವಧಿಯು ಒಂದು ವರ್ಷವಾಗಿರುತ್ತದೆ. ಆದುದರಿಂದ, ನೇಮಕಾತಿ ಆದೇಶವನ್ನು ಆಯ್ಕೆಪಟ್ಟಿ ಪ್ರಕಟಗೊಂಡ ಒಂದು ವರ್ಷದ ಒಳಗಾಗಿ ನೀಡಲು ಕ್ರಮಕೈಗೊಳ್ಳುವುದು.

(ಟಿ.ರವಿಕುಮಾರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 15/02/2018ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್ಎಸ್ಎ), (ಇ &ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು

ಮು.ತಿ.ನೋ..4

13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಆರಕ್ಷಕ ಮಹಾ ನಿರೀಕ್ಷಕರು ಮತ್ತು ಉಪ ಆರಕ್ಷಕ ಮಹಾ ನಿರೀಕ್ಷಕರು
17. ಎಲ್ಲಾ ಇಲಾಖಾ ಮುಖ್ಯಸ್ಥರು
18. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
19. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
21. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)

[1][(c) Omitted.]

[2][Note: Save as provided in Clause (b), no promotion shall be made against a direct recruitment vacancy.]

**18. Joining time for appointment:-**

(1) A candidate appointed by direct recruitment shall assume charge of the post specified by appointing authority as soon as possible after the date of the order of appointment, but not later than [2][fifteen days][2] from this date.

**Explanation.-** For the purpose of the sub-rule "the date of the order of appointment" means the date of despatch of the order of appointment by registered post to the address given by the candidate.

(2) Notwithstanding anything contained in sub-rule (1), the appointing authority may, on the application of the candidate and if satisfied that there are good and sufficient reasons for doing so, by order in writing, grant such further time, as it may deem necessary.

(3) The name of the candidate who fails to assume charge of the post within the time specified in sub-rule (1) or within the further time granted under sub-rule (2) shall stand deleted from the list of selected candidates and the candidates concerned shall cease to be eligible for appointment.

**19. Probation and appointments by promotion**

(1) All appointments by direct recruitment to any service or post shall be on probation for such period, not being less than two years, as may be provided for in the rules specially made in respect of such service or post;

Provided that where no period of probation or a period of probation of less than two years is specified in the rules of recruitment, the period of probation shall, notwithstanding anything contained in such rules, be two years.

Provided further that the Government may, by order.-

(i) waive the period of probation of a person if he has discharged for a period of two years the duties of the post to which he is appointed or of a post the duties of which are in the opinion of the Government, similar and equivalent to those of such post; or

(ii) reduce the period of probation of person by such period not exceeding the period during which he has discharged the duties of the post to which he was appointed or of a post the duties of which are, in the opinion of the Government, similar and equivalent to those of such post.

(2) Nothing contained in sub-rule (1) shall be applicable to persons recruited under the Karnataka District Judges (Recruitment) Rules, 1962.

(3) (a) Save as otherwise provided in the rules of recruitment relating to any service or post and subject to the proviso to clause (f) all appointments by promotion shall be on an officiating basis for a period of one year, which may, for reasons to be recorded in writing, be extended by the appointing authority by a period not exceeding one year;

---

1. Omitted vide Notification No. DPAR 42 SRR 93, dated 9th February 1994 Gazette dated 24-2-94.

2. Inserted Vide Notification No. DPAR 42 SRR 93, dated 9th February 1994 Gazette dated 24-2-94.